# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\3181\2013\ಸನಿಕಾಸ–1

ಬಹುಮಹಡಿಗಳ ಕಟ್ಟಡ,
ಡಾ||ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:07/06/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:** ದೂರುದಾರರಾದ ಶ್ರೀ ರಮೇಶ್ ಕೆ.ಆರ್., ಶಿರಾ ಟೌನ್, ತುಮಕೂರು ಜಿಲ್ಲೆ ರವರ ದೂರನ್ನು ಪರಿಹರಿಸುವ ಬಗ್ಗೆ.

*******

ತುಮಕೂರು ಜಿಲ್ಲೆಯ, ಶಿರಾ ತಾಲ್ಲೂಕಿನ ಶ್ರೀ ರಮೇಶ್ ಎಸ್.ಆರ್. (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಹಿಂದಿನ ತಹಶೀಲ್ದಾರ್ ಆದ ಶ್ರೀ ಎಸ್.ಬಿ. ಕುಲಕರ್ಣಿ ಮತ್ತು ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ನಗರಸಭೆಯ ಆಯುಕ್ತರು (ಇನ್ನು ಮುಂದೆ "ಎದುರುದಾರರು–1 ಮತ್ತು 2" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದೆ.

2) **ದೂರಿನ ಸಂಕ್ಷಿಪ್ತ ವಿವರಣೆ:** ತುಮಕೂರು ಜಿಲ್ಲೆ, ಶಿರಾ ತಾಲ್ಲೂಕು, ಶಿರಾ ಗ್ರಾಮದ ಸರ್ವೆ ನಂ.52ರಲ್ಲಿ ಶ್ರೀ ನಾರಾಯಣ ಸ್ವಾಮಿ ದೇವಸ್ಥಾನಕ್ಕೆ 07 ಗುಂಟೆ ಜಮೀನನ್ನು ಬಿಟ್ಟಿದ್ದು, ಸದರಿ ಜಮೀನಿನಲ್ಲಿ ಕೆಲವು ಖಾಸಗಿ ವ್ಯಕ್ತಿಗಳು ಒತ್ತುವರಿ ಮಾಡಿ, ಕಟ್ಟಡ ನಿರ್ಮಿಸಿದ್ದು, ಸದರಿ ಒತ್ತುವರಿದಾರರು ತೆರವುಗೊಳಿಸಿ, ದೇವಸ್ಥಾನಕ್ಕೆ ಮೀಸಲಿಟ್ಟ ಆಸ್ತಿಯನ್ನು ದೇವಸ್ಥಾನದ ವಶಕ್ಕೆ ಬಿಡಿಸಿಕೊಡಬೇಕೆಂದು ಎದುರುದಾರರಿಗೆ ಅರ್ಜಿ ಸಲ್ಲಿಸಿದರೂ ಸಹ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಆಪಾದಿಸಿ, ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕೋರಿದ್ದಾರೆ.

3) ಸದರಿ ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, 1ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ –

ಸದರಿ 7 ಗುಂಟೆ ಜಮೀನಿನ ಪೈಕಿ 4 ಗುಂಟೆ ಜಮೀನನ್ನು ಶೈಕ್ಷಣಿಕ ಉದ್ದೇಶಕ್ಕಾಗಿ ಶ್ರೀ ರಂಗನಾಥ ವಿದ್ಯಾಸಂಸ್ಥೆಯವರು ಒತ್ತುವರಿ ಮಾಡಿಕೊಂಡು ಹಾಸ್ಟಲ್ ನಿರ್ಮಿಸಿ, ಬಡ ವಿದ್ಯಾರ್ಥಿಗಳಿಗೆ ಉಚಿತ ವಸತಿ ಸೌಕರ್ಯ ಒದಗಿಸಿದ್ದು, ಆನಂತರ ಸದರಿ ಜಾಗದಲ್ಲಿ ಅಂಗಡಿ ಮಳಿಗೆಗಳನ್ನು ನಿರ್ಮಿಸಿ, ಬಾಡಿಗೆಗೆ ನೀಡಿ, ಅದರಿಂದ ಬಂದ ಹಣದಿಂದ, ವಿದ್ಯಾಸಂಸ್ಥೆ ನಡೆಸಿಕೊಂಡು ಬಂದಿರುತ್ತಾರೆ. ಸದರಿ ಜಾಗವನ್ನು ವಿದ್ಯಾಸಂಸ್ಥೆಗೆ ನೀಡಲು ದಿನಾಂಕ:20/09/1978ರಂದು ಶ್ರೀ ನಾರಾಯಣ ಸ್ವಾಮಿ ದೇವಸ್ಥಾನದ ವ್ಯವಸ್ಥಾಪನದ ಸಮಿತಿಯಲ್ಲಿ ತೀರ್ಮಾನವಾಗಿದ್ದು, ಕಾರಣಾಂತರಗಳಿಂದ ಸಂಸ್ಥೆಯವರು ನಡವಳಿಯಂತೆ ಖಾಯಂಗೊಳಿಸಲು ಖಾತಾ ಬದಲಾವಣೆ ಮಾಡಿರುವುದಿಲ್ಲ. ಕರ್ನಾಟಕ ಧಾರ್ಮಿಕ ದತ್ತಿ ಕಾಯ್ದೆ 2002ರ ಕಲಂ 62 (1) ಮತ್ತು ನಿಯಮ 28ರ ರೀತಿ ಮುಜರಾಯಿ ಇಲಾಖೆಗೆ ಸೇರಿದ ಒಂದು ಜಾಗವು ಮನವಿ ಸಲ್ಲಿಸಿರುವ ಸಂಸ್ಥೆಗೆ ಅತ್ಯಾವಶ್ಯಕವಾಗಿರುವುದು ಕಂಡುಬಂದಲ್ಲಿ, ಸದರಿ ಜಾಗವನ್ನು ಮನವಿ ಸಲ್ಲಿಸಿರುವ ಸಂಸ್ಥೆ ಹೆಸರಿಗೆ ದಾನದ ಮೂಲಕ ಕೊಡಬಹುದಾಗಿರುತ್ತದೆ. ಸದರಿ 4 ಗುಂಟೆ ಜಾಗವನ್ನು ಖಾತಾ ಮಾಡಿಕೊಡಲು ಕೋರಿ, ದಿನಾಂಕ:25/01/2012ರಂದು ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯನ್ನು ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರಿಗೆ ಜಿಲ್ಲಾಧಿಕಾರಿಗಳ ಮೂಲಕ ಸಲ್ಲಿಸಲಾಗಿದೆ. ಅದೇ ರೀತಿ ಉಳಿದ 3 ಗುಂಟೆ ಜಮೀನನ್ನು ಖಸಗಿಯವರು ಒತ್ತುವರಿ ಮಾಡಿಕೊಂಡು ಅಂಗಡಿ ಮಳಿಗೆ ನಿರ್ಮಿಸಿ ವ್ಯಾಪಾರದ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳುತ್ತಿದ್ದು, ಸದರಿ ಜಾಗವನ್ನು ದೇವಸ್ಥಾನದ ವಶಕ್ಕೆ ಪಡೆದು, ಬಾಡಿಗೆ ನಿಗಧಿಪಡಿಸುವ ಸಂಬಂಧ, ಉಪನೋಂದಣಾಧಿಕಾರಿಗಳು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರವರಿಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿರುತ್ತದೆ. ಸದರಿ ಸ್ವತ್ತಿನ ಬಗ್ಗೆ ಬಾಡಿಗೆ ನಿಗಧಿಪಡಿಸಿದ ನಂತರ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

4) **2ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ –**

ಶಿರಾ ಗ್ರಾಮದ ಸರ್ವೆ ನಂ.52ರಲ್ಲಿ ಶ್ರೀ ನಾರಾಯಣ ಸ್ವಾಮಿ ದೇವಸ್ಥಾನಕ್ಕೆ 7 ಗುಂಟೆ ಜಮೀನನ್ನು ಬಿಟ್ಟಿದ್ದು, ಸದರಿ ಜಾಗವು ಮುಜರಾಯಿ ಇಲಾಖೆ ಸಂಬಂಧಿಸಿದ್ದಾಗಿರುತ್ತದೆ ಎಂದು ಹೇಳಿದ್ದಾರೆ.

5) ಎದುರುದಾರರ ಆಕ್ಷೇಪಣೆಗಳಿಗೆ ದೂರುದಾರರಿಂದ ಪ್ರತ್ಯುತ್ತರ ಕೇಳಲಾಗಿ, ದೂರುದಾರರು ಯಾವುದೇ ಪ್ರತ್ಯುತ್ತರವನ್ನು ಸಲ್ಲಿಸಿರುವುದಿಲ್ಲ.

6) ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ಶಿರಾ ಗ್ರಾಮದ ಸರ್ವೆ ನಂ.52ರ 7 ಗುಂಟೆ ಜಮೀನನ್ನು ಶ್ರೀ ನಾರಾಯಣ ಸ್ವಾಮಿ ದೇವಾಲಯಕ್ಕೆ ಸಂಬಂಧಪಟ್ಟ ಜಮೀನಾಗಿರುತ್ತದೆ. ಸದರಿ ಜಮೀನಿನಲ್ಲಿ 4 ಗುಂಟೆ ಜಮೀನನ್ನು ಶ್ರೀ ರಂಗನಾಥ ವಿದ್ಯಾಸಂಸ್ಥೆಗೆ ಗುತ್ತಿಗೆ ಆಧಾರದ ಮೇರೆಗೆ ನೀಡಿದ್ದು, ಸದರಿ ಜಮೀನಿನಲ್ಲಿ ವಿದ್ಯಾಸಂಸ್ಥೆಯವರು ಅಂಗಡಿಗಳನ್ನು ನಿರ್ಮಿಸಿ, ಬಾಡಿಗೆ ಪಡೆದು ಅದರಲ್ಲಿ ವಿದ್ಯಾಸಂಸ್ಥೆ ನಡೆಸಿ ಬಡ ವಿದ್ಯಾರ್ಥಿಗಳಿಗೆ ಆಶ್ರಯ ನೀಡಿರುವುದು ಕಂಡುಬಂದಿರುತ್ತದೆ. ಆದರೆ, ಸದರಿ ಜಮೀನನ್ನು ವಿದ್ಯಾಸಂಸ್ಥೆಗೆ ನೀಡಿರುವ ಬಗ್ಗೆ ಸರ್ಕಾರದ ಆದೇಶವಿರುವುದಿಲ್ಲ. ಉಳಿದ 3 ಗುಂಟೆ ಜಮೀನನ್ನು ನಂಜುಂಡಸ್ವಾಮಿ ಬಿನ್ ಬಸವರಾಜಪ್ಪ ಎನ್ನುವವರು 1 ಗುಂಟೆ, ನಾರಯಾಣಚಾರ್ 1 ಗುಂಟೆ, ಲೋಕಯ್ಯ ಬಿನ್ ದಾನಿಕೊಪ್ಪಯ್ಯ 1/2 ಗುಂಟೆ ಜಮೀನನ್ನು ಒತ್ತುವರಿ ಮಾಡಿ, ಅಂಗಡಿ ನಿರ್ಮಿಸಿರುವುದು ಕಂಡುಬರುತ್ತದೆ. ಉಳಿದ 1/2 ಜಮೀನು ಖಾಲಿಯಿದ್ದು ಕುಂಚಟಿಗರ ಸಂಘ, ಶಿರಾರವರು ಕಮಾನು ನಿರ್ಮಿಸಿರುವುದು ಕಂಡುಬರುತ್ತದೆ. ಆದರೆ, ಸದರಿ ಜಮೀನಿಗೆ ಸಂಬಂಧಪಟ್ಟಂತೆ, ಶ್ರೀ ರಂಗನಾಥ ವಿದ್ಯಾಸಂಸ್ಥೆಗೆ ಗುತ್ತಿಗೆ ನೀಡುವ ಸಂಬಂಧ, ದಿನಾಂಕ:19/03/2015ರಂದು ಪ್ರಸ್ತಾವನೆಯನ್ನು ಜಿಲ್ಲಾದಿಕಾರಿಗಳ ಮೂಲಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು ರವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಆದರೆ, ಸದರಿ ಸ್ವತ್ತು ಶ್ರೀ ರಂಗನಾಥ ವಿದ್ಯಾಸಂಸ್ಥೆಗೆ ಮಂಜೂರಾದ ಬಗ್ಗೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಿಲ್ಲ. ಉಳಿದ 3 ಗುಂಟೆ ಜಮೀನಿನಲ್ಲಿ ಕಟ್ಟಡ ನಿರ್ಮಿಸಿದ್ದು, ಬಾಡಿಗೆ ನಿಗಧಿಪಡಿಸುವ ಬಗ್ಗೆ, ಜಿಲ್ಲಾಧಿಕಾರಿಗಳು ಮತ್ತು ಲೋಕೋಪಯೋಗಿ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಈ ಬಗ್ಗೆ ಯಾವುದೇ ಆದೇಶ ಬಂದಿರುವುದಿಲ್ಲ. ಉಳಿದ 3 ಗುಂಟೆ ಜಮೀನಿನಲ್ಲಿ ಒತ್ತುವರಿ ಮಾಡಿ ಅಂಗಡಿ ಮಳಿಗೆ ನಿರ್ಮಿಸಿರುವ ಖಾಸಗಿ ವ್ಯಕ್ತಿಗಳ ವಿರುದ್ಧ ಈವರೆವಿಗೂ ಸಹ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಸದರಿಸರ್ವೆ ನಂ.52ರ ಜಮೀನಿನಲ್ಲಿ 7 ಗುಂಟೆ ಜಮೀನನ್ನು ಶ್ರೀ ನಾರಾಯಣ ಸ್ವಾಮಿ ದೇವಸ್ಥಾನಕ್ಕೆ ಮೀಸಲಿಟ್ಟಿದ್ದರೂ ಸಹ ಅದನ್ನು ಕೆಲವು ಖಾಸಗಿ ವ್ಯಕ್ತಿಗಳು ಮತ್ತು ಶ್ರೀ ರಂಗನಾಥ ವಿದ್ಯಾಸಂಸ್ಥೆಯವರು ಒತ್ತುವರಿ ಮಾಡಿ ಕಟ್ಟಡ ನಿರ್ಮಿಸಿ, ಆ ಮೂಲಕ ಬಾಡಿಗೆ ವಸೂಲಿ ಮಾಡುತ್ತಿರುವ ವಿಚಾರ ಎದುರುದಾರರಿಗೆ ಗೊತ್ತಿದ್ದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲ. ಸದರಿ ಸ್ವತ್ತಿನಲ್ಲಿ ಸರ್ಕಾರದ ಮಂಜೂರಾತಿ ಆದೇಶವಿಲ್ಲವಿದ್ದರೂ ಸಹ ಶ್ರೀ ರಂಗನಾಥ ವಿದ್ಯಾಸಂಸ್ಥೆಯವರು ಮತ್ತು ಕೆಲವು ಖಾಸಗಿ ವ್ಯಕ್ತಿಗಳು ಅನಧಿಕೃತವಾಗಿ ಒತ್ತುವರಿ ಮಾಡಿ ಕಟ್ಟಡ ಹಾಗೂ ಅಂಗಡಿ ಮಳಿಗೆಗಳನ್ನು ನಿರ್ಮಿಸಿ, ಬಾಡಿಗೆ

ವಸೂಲಿ ಮಾಡುತ್ತಿದ್ದರೂ ಸಹ ಸದರಿಯವರ ವಿರುದ್ಧ 1ನೇ ಎದುರುದಾರರು ಯಾವುದೇ ಕ್ರಮ ಕೈಗೊಳ್ಳದೇ ಕರ್ತವ್ಯಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ.

7) 2ನೇ ಎದುರುದಾರರ ವಿರುದ್ಧ ಆರೋಪ ಸಾಬೀತು ಆಗಿದೇ ಇರುವುದರಿಂದ, ಸದರಿಯವರ ವಿರುದ್ಧದ ನಡವಳಿಗಳನ್ನು ಕೈಬಿಡಲಾಗಿದೆ.

8) ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

9) ಆದ್ದರಿಂದ, ಶಿರಾ ಟೌನ್‌ನ ಸರ್ವೆ ನಂ.52ರ 7 ಗುಂಟೆ ಜಮೀನು ಶ್ರೀ ನಾರಾಯಣ ಸ್ವಾಮಿ ದೇವಸ್ಥಾನಕ್ಕೆ ಸಂಬಂಧಿಸಿದ್ದು, ಸದರಿ ಜಮೀನಿನಲ್ಲಿ ಒತ್ತುವರಿಯನ್ನು ತೆರವುಗೊಳಿಸಿ, ದೇವಸ್ಥಾನಕ್ಕೆ ಮೀಸಲಿಡುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(1)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ.

10) ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 7/6/17.

(ನ್ಯಾಯಾಮೂರ್ತಿ ಸುಬಾಷ್ ಬಿ ಅಡಿ)
ಉಪಲೋಕಾಯುಕ್ತ-2,
ಕರ್ನಾಟಕ ರಾಜ್ಯ.